# ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

"ಜ್ಞಾನ ಸಂಗಮ" ಬೆಳಗಾವಿ – 590 018

**ರಾಷ್ಟ್ರೀಯ ಸೇವಾ ಯೋಜನೆ**

ಡಾ|| ಹೆಚ್.ಎನ್. ಜಗನ್ನಾಥ ರೆಡ್ಡಿ ಬಿ.ಇ., ಎಂ.ಇ., ಪಿಹೆಚ್.ಡಿ.
ಕುಲಸಚಿವರು

ದೂರವಾಣಿ ಸಂ : 0831–2405468
ಫ್ಯಾಕ್ಸ ಸಂ : 0831–2405467


ಸಂ. ವಿತಾವಿ/ಬಿ.ಜಿ.ಎಮ್/ರಾ.ಸೇ.ಯೋ/ಸಾಮ್ಯಾನ/2018-19/ 9764    ದಿನಾಂಕ: 5 FEB 2019

**:ಸುತ್ತೋಲೆ:**

**ವಿಷಯ :** 2019ರ ಲೋಕಸಭಾ ಚುನಾವಣೆ ಮತದಾರರಲ್ಲಿ ಜಾಗೃತಿ ಮೂಡಿಸುವ ಬಗ್ಗೆ –

ಉಲ್ಲೇಖ: ಮುಖ್ಯ ಚುನಾವಣಾಧಿಕಾರಿಗಳ ಪತ್ರ ಸಂಖ್ಯೆ:ಸಿ.ಆ.ಸು.ಇ:ಒ:ಸ್ವೀಪ್: 2019/ದಿ: 31.01.2019

ಉಲ್ಲೇಖ: ಯುಸೇಇ/ರಾ.ಸೇಯೋ/2018-19/475 ದಿನಾಂಕ:04/02/2019

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, 5 ವರ್ಷಕೊಮ್ಮೆ ವಿಧಾನ ಸಭಾ ಮತ್ತು ಲೋಕ ಸಭಾ ಚುನಾವಣೆಗಳು ನಡೆಯುತ್ತದೆ. 2019ರಲ್ಲಿ ಲೋಕಸಭಾ ಚುನಾವಣೆಯು ನಡೆಯಲಿದೆ. ಚುನಾವಣೆಯ ಮಹತ್ವ ತಮಗೆಲ್ಲ ತಿಳಿದ ವಿಷಯವಾಗಿರುತ್ತದೆ. ಮತದಾರರು ತಮಗೆ ಬೇಕಾದ ಸರ್ಕಾರವನ್ನು ಪಡೆಯಬೇಕಾದರೆ ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಬೇಕಾಗಿರುತ್ತದೆ. ಅದರಲ್ಲೂ ಯುವಕರು ಮತ ಚಲಾವಣೆಯಲ್ಲಿ ಆಸಕ್ತಿ ತೋರಿಸಬೇಕಾಗಿರುತ್ತದೆ. ಇಂದಿನ ಮಕ್ಕಳೇ ಮುಂದಿನ ಯುವಕರು ಹಾಗೂ ದೇಶವಾಳುವ ನಾಯಕರಾಗುತ್ತಾರೆ.

ಈಗಿನ ಮಕ್ಕಳಲ್ಲಿ ಮತದಾನದ ಬಗ್ಗೆ ಅರಿವು ಮೂಡಿಸಬೇಕಾಗಿರುತ್ತದೆ. ಯುವಕರು 18ವರ್ಷ ತುಂಬಿದಾಗ ಮತದಾರರ ಪಟ್ಟಿಯಲ್ಲಿ ಹೆಸರನ್ನು ಸೇರಿಸಲು ಅರ್ಜಿ ಸಲ್ಲಿಸುವುದು ಹಾಗೂ ಮತದಾರರ ಪಟ್ಟಿಯಲ್ಲಿ ಅವರುಗಳ ಹೆಸರು ಸೇರಿರುವುದರ ಬಗ್ಗೆ ಖಾತರಿ ಪಡಿಸಿಕೊಳ್ಳುವುದು. ಮತದಾನದ ದಿನ ಮತದಾನ ಮಾಡುವಂತೆ ಪ್ರೇರೇಪಿಸುವುದರ ಬಗ್ಗೆ ಮಕ್ಕಳಿಗೆ ತಿಳುವಳಿಕೆ ನೀಡಬೇಕಾಗಿರುತ್ತದೆ.

ಕೇಂದ್ರ ಚುನಾವಣಾ ಆಯೋಗದ ಧ್ಯೇಯ ಮತದಾನದಿಂದ ಯಾರೊಬ್ಬರು ಹೊರಗುಳಿಯಬಾರದು. ಈ ಧ್ಯೇಯವನ್ನು ಸಾಕ್ಷತಗೊಳಿಸಬೇಕಾದರೆ ಇಂದಿನ ಮಕ್ಕಳಿಗೆ ಚುನಾವಣಾ ಪ್ರಕ್ರಿಯೆಯ ಬಗ್ಗೆ ಅರಿವು ಮೂಡಿಸಬೇಕಾಗಿರುತ್ತದೆ. ಈ ಹಿನ್ನಲೆಯಲ್ಲಿ ವಿ.ತಾ.ವಿ.ಯ ಎಲ್ಲಾ ತಾಂತ್ರಿಕ ಮಹಾವಿದ್ಯಾಲಯಗಳಲ್ಲಿ ಮತದಾರರ ಸಾಕ್ಷರತಾ ಸಂಘಗಳನ್ನು ಸ್ಥಾಪಿಸಿ ಚುನಾವಣೆಯ ವಿಷಯದ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲು ಸೂಚಿಸಲಾಗಿದೆ.

ವಿದ್ಯಾರ್ಥಿಗಳಿಗೆ ಪ್ರಾರಂಭದಲ್ಲಿಯೇ ಚುನಾವಣೆಯ ಮಹತ್ವದ ಬಗ್ಗೆ ಅರಿವು ಮೂಡಿಸಿದರೆ ಮುಂದೆ ಚುನಾವಣೆಯ ಪ್ರಕ್ರಿಯೆಯಲ್ಲಿ ಗುರುತರವಾದ ಬದಲಾವಣೆಯನ್ನು ತರಬಹುದಾಗಿರುತ್ತದೆ. ಈ ದೃಷ್ಟಿಯಿಂದ ತಮ್ಮ ಮಹಾವಿದ್ಯಾಲಯದ ಎನ್.ಎಸ್.ಎಸ್. ಸ್ವಯಂ ಸೇವಕರಿಂದ ನಾಗರಿಕರಿಗೆ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಆಯಾ ಜಿಲ್ಲೆ, ತಾಲ್ಲೂಕು, ಗ್ರಾಮ ಮಟ್ಟದಲ್ಲಿ ಮತದಾರರ ನೊಂದಣೆ, ಮತದಾನದ ಮಹತ್ವ EVM/VV/PAT ಗಳು ಬಗ್ಗೆ ಅರಿವು ಮೂಡಿಸಲು ಅಗತ್ಯ ಕ್ರಮಕೈಗೊಳ್ಳಲು ಕೋರಲಾಗಿದೆ.

ರಾಷ್ಟ್ರೀಯ ಸೇವಾ ಯೋಜನೆಯು ಈ ಪವಿತ್ರ ಕಾರ್ಯದಲ್ಲಿ ವ್ಯಾಪಕವಾಗಿ ತೊಡಗಿಸಿಕೊಳ್ಳಬೇಕಾಗಿದ್ದು. ಈ ಬಗ್ಗೆ ತಮ್ಮ ಮಹಾವಿದ್ಯಾಲಯದ ಎನ್.ಎಸ್.ಎಸ್. ಕಾರ್ಯಕ್ರಮಾಧಿಕಾಗಳಿಗೆ ನಿರ್ದೇಶಿಸಲು ತಮ್ಮನ್ನು ಕೋರಲಾಗಿದೆ. ಮತ್ತು ಜಾಗೃತಿ ಮೂಡಿಸುವ ಕಾರ್ಯಕ್ರಮ ಆಯೋಜಿಸಿದ ಬಗ್ಗೆ ಎನ್.ಎಸ್.ಎಸ್. ಕಾರ್ಯಕ್ರಮಾಧಿಕಾಗಳು ಒಂದು ಪುಟ ಮಿರದಂತೆ ವರದಿಯನ್ನು ಇ-ಮೇಲ್ ಮೂಲಕ (e-mail-id: nss@vtu.ac.in) ವಿ.ತಾ.ವಿ., ಎನ್.ಎಸ್.ಎಸ್. ಕಛೇರಿಗೆ ಸಲ್ಲಿಸುವಂತೆ ಸೂಚಿಸಬೇಕೆಂದು ಕೋರುತ್ತೇವೆ.

ವಂದನೆಗಳೊಂದಿಗೆ,

05/02/19
ಕುಲಸಚಿವರು

**ಇವರಿಗೆ,**

ಪ್ರಾಂಶುಪಾಲರು ಮತ್ತು ಸಂಯೋಜನಾಧಿಕಾರಿಗಳು. ವಿ.ತಾ.ವಿ. ಅಧಿನಕ್ಕೊಳಪಡುವ ಎಲ್ಲಾ ಅಭಿಯಾಂತ್ರಿಕ/ತಾಂತ್ರಿಕ ಮಹಾವಿದ್ಯಾಲಯಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಕುಲಪತಿಗಳು, ವಿ.ತಾ.ವಿ., ಬೆಳಗಾವಿ ಇವರಿಗೆ ಕುಲಪತಿಗಳ ಕಾರ್ಯದರ್ಶಿಗಳ ಮುಖಾಂತರ.
2. ರಾಜ್ಯ ಎನ್.ಎಸ್.ಎಸ್. ಅಧಿಕಾರಿಗಳು ರಾ.ಸೇ.ಯೋ. ಕೋಶ, ಯುಸೇಇ, ಬೆಂಗಳೂರು.
3. ನಿರ್ದೇಶಕರು ಎನ್.ಎಸ್.ಎಸ್. ಪ್ರಾದೇಶಿಕ ಕೇಂದ್ರ ಕಛೇರಿ, ಬೆಂಗಳೂರು.
4. ವಿಶೇಷಾಧಿಕಾರಿಗಳು, ಸಿ.ಎನ್.ಸಿ ವಿಭಾಗ, ವಿತಾವಿ., ಬೆಳಗಾವಿ, ಇವರಿಗೆ ಸದರಿ ಸುತ್ತೋಲೆಯನ್ನು ವಿ.ತಾ.ವಿ.ಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
5. ಕಛೇರಿ ಪ್ರತಿ.